# ಕರ್ನಾಟಕ ಸರ್ಕಾರ

ಸಂ: ಗ್ರಾಅಪ 1061 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11.12.2019

## ಸುತ್ತೋಲೆ

ವಿಷಯ: ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯ ವಾಹಿನಿ ತರಲು ಸ್ಥಳೀಯ ಸರ್ಕಾರಗಳು ಕೈಗೊಳ್ಳಬೇಕಾದ ಕಾರ್ಯಕ್ರಮಗಳ ಮಾರ್ಗಸೂಚಿಗಳ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಇವರ ಅ.ಸ. ಪತ್ರ ಸಂ. ಇಡಿ 05 ಮಾಹಿತಿ 2019, ದಿನಾಂಕ 10.12.2019.

---

ಸಂವಿಧಾನದ ಕಲಂ 23(ಎ) ಪ್ರಕಾರ 6 ರಿಂದ 14 ವರ್ಷದ ಪ್ರತಿ ಮಗು 8 ವರ್ಷಗಳ ಶಾಲಾ ಶಿಕ್ಷಣವನ್ನು ಪಡೆಯುವುದು ಮೂಲಭೂತ ಹಕ್ಕು. ಸಂವಿಧಾನದ ಈ ಆಶಯವನ್ನು ಈಡೇರಿಸುವ ನಿಟ್ಟಿನಲ್ಲಿ 8 ವರ್ಷಗಳ ಶಿಕ್ಷಣದ ಸಾರ್ವತ್ರೀಕರಣವು ಕೇಂದ್ರ, ರಾಜ್ಯ ಹಾಗೂ ಸ್ಥಳೀಯ ಸರ್ಕಾರಗಳ ಸಾಮೂಹಿಕ ಜವಾಬ್ದಾರಿಯಾಗಿದೆ. ಪ್ರಾಥಮಿಕ ಶಿಕ್ಷಣದ ಸಾರ್ವತ್ರೀಕರಣ ಪ್ರಕ್ರಿಯೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಿಕ್ಷಣದ ಮುಖ್ಯ ವಾಹಿನಿಗೆ ತರುವುದು ಅತಿ ದೊಡ್ಡ ಸವಾಲಾಗಿರುತ್ತದೆ. ಪೋಷಕರ ಬಡತನ, ಅನಕ್ಷರತೆ, ಶಿಕ್ಷಣದ ಬಗ್ಗೆ ಅರಿವಿನ ಕೊರತೆ, ಸಾಮಾಜಿಕ, ಆಡಳಿತಾತ್ಮಕ ಹಾಗೂ ಆರ್ಥಿಕ ಪರಿಸ್ಥಿತಿಗಳು ಶಿಕ್ಷಣ ಸಾರ್ವತ್ರೀಕರಣ ಪ್ರಕ್ರಿಯೆಯಲ್ಲಿ ತೊಡಕಾಗಿರುತ್ತದೆ.

ಈ ಎಲ್ಲಾ ಅಂಶಗಳನ್ನು ಮೀರಿ ಕೇಂದ್ರ, ರಾಜ್ಯ ಹಾಗೂ ಸ್ಥಳೀಯ ಸರ್ಕಾರಗಳು ಶಿಕ್ಷಣದ ಬಗ್ಗೆ ಸಂವಿಧಾನದ ಆಶಯವನ್ನು ಈಡೇರಿಸುವ ನಿಟ್ಟಿನಲ್ಲಿ ಹಲವು ಉಪಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಇಂತಹ ಕ್ರಮಗಳಲ್ಲಿ ಒಂದು ವಿಭಿನ್ನ ಕಾರಣಗಳಿಗಾಗಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯ ವಾಹಿನಿಗೆ ಕರೆ ತಂದು ಅವರೆಲ್ಲರಿಗೆ ಗುಣಮಟ್ಟದ ಪ್ರಾಥಮಿಕ ಶಿಕ್ಷಣ ಲಭ್ಯವಾಗುವಂತೆ ನೋಡಿಕೊಳ್ಳುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳೊಂದಿಗೆ ಸ್ಥಳೀಯ ಸರ್ಕಾರಗಳ ಜವಾಬ್ದಾರಿಯಾಗಿದೆ.

ಶಿಕ್ಷಣ ಹಕ್ಕು ಕಾಯ್ದೆ ಕಲಂ 32ರಲ್ಲಿನ ಉಪಬಂಧದಂತೆ ಸ್ಥಳೀಯ ಸರ್ಕಾರಗಳು ಶಾಲೆಯ ಮೂಲಭೂತ ಸೌಕರ್ಯ, ಮಕ್ಕಳ ದಾಖಲಾತಿ, ಹಾಜರಾತಿ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಶಿಕ್ಷಣ ಮುಖ್ಯ ವಾಹಿನಿಗೆ ತರುವ ಕಾರ್ಯಜವಾಬ್ದಾರಿಯನ್ನು ನಿರ್ವಹಿಸಬೇಕಾಗಿರುತ್ತದೆ. ಮುಂದುವರೆದು, ಇದೇ ಕಾಯ್ದೆಯ ನಿಯಮ 9(ಡಿ)ಯಲ್ಲಿ ಸ್ಥಳೀಯ ಸರ್ಕಾರಗಳು ಅಂದರೆ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಮುನಿಸಿಪಲ್ ಸಂಸ್ಥೆಗಳು Village Education Register ಹಾಗೂ Ward Education Register ಗಳನ್ನು ನಿರ್ವಹಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಈ ಜವಾಬ್ದಾರಿಗಳನ್ನು ನಿರ್ವಹಿಸದಿರುವ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂ. 15768/2013

ರಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ನೀಡಿರುವ ನಿರ್ದೇಶನದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಅವುಗಳ ಜವಾಬ್ದಾರಿಗಳನ್ನು ನಿರ್ವಹಿಸಲು ನಿರ್ದೇಶನ ನೀಡುವಂತೆ ಸೂಚಿಸಿರುತ್ತದೆ.

ಈ ಎಲ್ಲಾ ಪ್ರಮುಖ ಅಂಶಗಳನ್ನಾಧರಿಸಿ ದಿನಾಂಕ 07.11.2019 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಕಾರ್ಮಿಕರೊಡನೆ ವಲಸೆ ಬಂದ ಮಕ್ಕಳ ಗಣತಿಯನ್ನು ನಡೆಸಿ ಅವರನ್ನು ಶಾಲೆಗೆ ದಾಖಲಾಗುವಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ಸಹ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವಹಿಸಲಾಗಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿಯ ಅಧಿಕಾರಿಗಳು ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳೊಡನೆ ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳೊಡನೆ ಚರ್ಚಿಸಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪ್ರಾಥಮಿಕ ಶಿಕ್ಷಣದ ಸಾರ್ವತ್ರೀಕರಣ ಪ್ರಕ್ರಿಯೆಯಲ್ಲಿ ಭಾಗವಹಿಸಲು ಕ್ರಿಯಾತ್ಮಕವಾಗಿ ಕಾರ್ಯಕ್ರಮಗಳನ್ನು ರೂಪಿಸುವಂತೆ ಮತ್ತು ಅನುಷ್ಠಾನಗೊಳಿಸುವಂತೆ ಈ ಮೂಲಕ ಸೂಚಿಸಲಾಗಿದೆ.

(ಎಸ್.ಎ.ಅಶ್ರಫುಲ್ ಹಸನ್)
ನಿರ್ದೇಶಕರು (ಪಂಚಾಯತ್ ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಶಾರಕ/ಹೆಪ್ರ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಇವರ ಮಾಹಿತಿಗಾಗಿ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಇವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ&ಪಂ.ರಾಜ್ ಇಲಾಖೆ.